ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.

ಸಂಖ್ಯೆ:ಪಮೂಶಿ/ಶೈಶಾ/ಕ.ಮಾ.ಪ್ರ.ಸ/2016-17. ದಿನಾಂಕ:13-06-2016

**ಸುತ್ತೋಲೆ**

ವಿಷಯ: 2016-17ನೇ ಸಾಲಿನ ಕನ್ನಡ ಮಾಧ್ಯಮ ಪ್ರಶಸ್ತಿ ಸಮಾರಂಭಕ್ಕೆ ಅವಶ್ಯವಿರುವ ದ್ವಿತೀಯ ಪಿ.ಯು.ಸಿ ವಿದ್ಯಾರ್ಥಿಗಳ ವಿವರ ಪಡೆಯುವ ಬಗ್ಗೆ.

ಉಲ್ಲೇಖ: ಕಾರ್ಯದರ್ಶಿಗಳು, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ರವರ ಪತ್ರ ಸಂಖ್ಯೆ: ಕಅಪ್ರಾ/ಕಾ2/ಕ.ಮಾ.ಪ್ರ.ಕ/12/2016-17 ದಿನಾಂಕ: 31-05-2016.

*****

ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಕಳೆದ 7 ವರ್ಷಗಳಿಂದ ಕನ್ನಡ ಮಾಧ್ಯಮದಲ್ಲಿ ಪಿ.ಯು.ಸಿಯನ್ನು ಅಭ್ಯಾಸ ಮಾಡಿ ತಾಲ್ಲೂಕಿಗೆ ಅತಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳನ್ನು ಗುರುತಿಸಿ ಪ್ರೋತ್ಸಾಹಿಸುತ್ತಿರುತ್ತಿದೆ. ಅದೇ ರೀತಿ 2016-17ನೇ ಸಾಲಿನ ಕನ್ನಡ ಮಾಧ್ಯಮ ಪ್ರಶಸ್ತಿ ಕಾರ್ಯಕ್ರಮದಡಿ ಪ್ರಾಧಿಕಾರದಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವಂತೆ ಪ್ರತಿ ತಾಲ್ಲೂಕಿನಲ್ಲಿ ಅತಿ ಹೆಚ್ಚು ಅಂಕಗಳನ್ನು ಪಡೆದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳನ್ನು ಸೇರಿಸಿ 2016 ಮಾರ್ಚ್ ತಿಂಗಳಲ್ಲಿ ಕನ್ನಡ ಮಾಧ್ಯಮದಲ್ಲಿ ಪಿ.ಯುಸಿ ಪರೀಕ್ಷೆಯನ್ನು ಬರೆದು "ತಾಲ್ಲೂಕು ಮಟ್ಟದಲ್ಲಿ" ಅತಿ ಹೆಚ್ಚು ಅಂಕಗಳಿಸಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ನೀಡಲು ದಿನಾಂಕ: 27-05-2016ರ ಸರ್ವ ಸದಸ್ಯರ ಸಭೆಯಲ್ಲಿ ತೀರ್ಮಾನಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ಎಲ್ಲಾ ಉಪ ನಿರ್ದೇಶಕರು, ಈ ಬಗ್ಗೆ ವೈಯಕ್ತಿಕ ಆಸಕ್ತಿಯನ್ನು ವಹಿಸಿ ತಮ್ಮ ಜಿಲ್ಲಾ ವ್ಯಾಪ್ತಿಗೆ ಒಳಪಡುವ ಜಿಲ್ಲೆಯಲ್ಲಿನ ವಿದ್ಯಾರ್ಥಿ/ವಿದ್ಯಾರ್ಥಿನಿಯರ ವಿವರಗಳನ್ನು ಸಲ್ಲಿಸಲು ತಿಳಿಸಿದೆ. ಉಲ್ಲೇಖದಲ್ಲಿನ ಪತ್ರದ ಪ್ರತಿ ಹಾಗೂ ನಮೂನೆಯನ್ನು ಇದರೊಂದಿಗೆ ಲಗತ್ತಿಸಿದೆ. ನಿಮ್ಮ ಜಿಲ್ಲೆಯ ವ್ಯಾಪ್ತಿಗೆ ಒಳಪಡುವ ವಿದ್ಯಾರ್ಥಿಗಳ ಹೆಸರು, ಶಾಲೆಯ ಹಾಗೂ ಮನೆಯ ವಿಳಾಸ.(ಪೋಷಕರ/ವಿದ್ಯಾರ್ಥಿಯ ದೂರವಾಣಿ/ಮೊಬೈಲ್ ಸಂಖ್ಯೆ) ಹಾಗೂ ಪಡೆದಿರುವ ಅಂಕಗಳ ಪಟ್ಟಿಯನ್ನು ರಾಜ್ಯಭಾಷೆಯಾದ ಕನ್ನಡದಲ್ಲಿ ಹಾರ್ಡ್ ಮತ್ತು ಸಾಫ್ಟ್ ಪ್ರತಿಗಳನ್ನು ಕೂಲಂಕಶವಾಗಿ ಪರಿಶೀಲಿಸಿ, ಈ ನಿರ್ದೇಶನಾಲಯದ **ಸಹಾಯಕ ನಿರ್ದೇಶಕರು(ಶೈಕ್ಷಣಿಕ ಶಾಖೆ) ಪದವಿ ಪೂರ್ವ ಶಿಕ್ಷಣ ಇಲಾಖೆ, ಕೊಠಡಿ ಸಂಖ್ಯೆ: 10, 18ನೇ ಅಡ್ಡ ರಸ್ತೆ ಮಲ್ಲೇಶ್ವರಂ, ಬೆಂಗಳೂರು-560012.** ಇವರಿಗೆ ಈ ಪತ್ರ ತಲುಪಿದ 10 ದಿನಗಳೊಳಗಾಗಿ ಕಡ್ಡಾಯವಾಗಿ ಸಲ್ಲಿಸಲು ಸೂಚಿಸಿದೆ. ತಪ್ಪಿದಲ್ಲಿ ಭವಿಷ್ಯದಲ್ಲಿ ಉದ್ಭವಿಸುವ ಎಲ್ಲಾ ಆಡಳಿತಾತ್ಮಕ ಸಮಸ್ಯೆಗಳಿಗೆ ನಿಮ್ಮನ್ನೆ ಸಂಪೂರ್ಣ ಹೊಣೆಗಾರರನ್ನಾಗಿಸಿ ನಿಮ್ಮ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗುದೆಂದು ಈ ಮೂಲಕ ಸ್ಪಷ್ಟಪಡಿಸಿದೆ.

ಜಂಟಿ ನಿರ್ದೇಶಕರು(ಶೈಕ್ಷಣಿಕ)
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿ:

ಎಲ್ಲಾ ಪದವಿ ಪೂರ್ವ ಶಿಕ್ಷಣ ಇಲಾಖೆಯ ಜಿಲ್ಲಾ ಉಪ ನಿರ್ದೇಶಕರುಗಳಿಗೆ.

ಡಾ. ಕೆ. ಮುರಳಿಧರ
ಕಾರ್ಯದರ್ಶಿ
ಕನ್ನಡ ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು

ದೂರವಾಣಿ : ಕಛೇರಿ : 22286773
22033239
ಕೊಠಡಿ ಸಂಖ್ಯೆ: 263, ಎರಡನೇ ಮಹಡಿ
ವಿಧಾನಸೌಧ, ಬೆಂಗಳೂರು – 560 001

ಸಂಖ್ಯೆ:ಕಅಪ್ರಾ/ಕಾ2/ಕ.ಮಾ.ಪ್ರ.ಕ/12/2016-17

ದಿನಾಂಕ 31-05-2016

ಗೆ,
ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಅಡ್ಡರಸ್ತೆ, ಮಲ್ಲೇಶ್ವರಂ,
ಬೆಂಗಳೂರು.

ಮಾನ್ಯರೆ,

ವಿಷಯ:- 2016-17ನೇ ಸಾಲಿನ ಕನ್ನಡ ಮಾಧ್ಯಮ ಪ್ರಶಸ್ತಿ ಸಮಾರಂಭಕ್ಕೆ ಅವಶ್ಯವಿರುವ ದ್ವಿತೀಯ ಪಿ.ಯು.ಸಿ ವಿದ್ಯಾರ್ಥಿಗಳ ವಿವರ ಪಡೆಯುವ ಬಗ್ಗೆ.

ಉಲ್ಲೇಖ:-ಪ್ರಾಧಿಕಾರದ ಸರ್ವ ಸದಸ್ಯರ ಸಭೆ ದಿನಾಂಕ 21-05-2016

* * * * * *

ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಕಳೆದ 7 ವರ್ಷಗಳಿಂದ ಕನ್ನಡ ಮಾಧ್ಯಮದಲ್ಲಿ ಪಿ.ಯು.ಸಿ.ಯನ್ನು ಅಭ್ಯಾಸ ಮಾಡಿ ತಾಲ್ಲೂಕಿಗೆ ಅತಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳನ್ನು ಗುರುತಿಸಿ ಪ್ರೋತ್ಸಾಹಿಸುತ್ತಿರುವುದು ತಮಗೆ ತಿಳಿದ ವಿಷಯವಾಗಿದೆ. ಅದೇ ರೀತಿ 2016-17ನೇ ಸಾಲಿನ ಕನ್ನಡ ಮಾಧ್ಯಮ ಪ್ರಶಸ್ತಿ ಕಾರ್ಯಕ್ರಮದಡಿ ಪ್ರಾಧಿಕಾರದಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವಂತೆ ಪ್ರತಿ ತಾಲೂಕಿನಲ್ಲಿ ಅತಿ ಹೆಚ್ಚು ಅಂಕಗಳನ್ನು ಪಡೆದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳನ್ನು ಸೇರಿಸಿ ಕನ್ನಡ ಮಾಧ್ಯಮದಲ್ಲಿ ಪಿ.ಯು.ಸಿ. ಪರೀಕ್ಷೆಯನ್ನು ಬರೆದು "ತಾಲ್ಲೂಕು ಮಟ್ಟದಲ್ಲಿ" ಅತಿ ಹೆಚ್ಚು ಅಂಕಗಳಿಸಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ನೀಡಲು ದಿನಾಂಕ 27-05-2016ರ ಸರ್ವ ಸದಸ್ಯರ ಸಭೆಯಲ್ಲಿ ತೀರ್ಮಾನಿಸಿದೆ.

ಈ ಹಿನ್ನೆಲೆಯಲ್ಲಿ ಕೆಳಕಂಡಂತೆ ಪಿ.ಯು.ಸಿ ಯನ್ನು ಕನ್ನಡ ಮಾಧ್ಯಮದಲ್ಲಿ ಅಧ್ಯಯನ ಮಾಡಿ 2016 ಮಾರ್ಚ್ ತಿಂಗಳಲ್ಲಿ ಪರೀಕ್ಷೆ ಬರೆದು ಉತ್ತೀರ್ಣರಾದ ವಿದ್ಯಾರ್ಥಿಗಳನ್ನು ಪ್ರಾಧಿಕಾರದ ನಿಬಂಧನೆಗಳನ್ವಯ ಆಯ್ಕೆಮಾಡಿ ಸೂಕ್ತ ಶಿಫಾರಸ್ಸಿನೊಂದಿಗೆ ಅಧಿಕೃತ ಪಟ್ಟಿಯನ್ನು ಈ ಪತ್ರದೊಂದಿಗೆ ಲಗತ್ತಿಸಿರುವ ನಮೂನೆಯಲ್ಲಿ ಒದಗಿಸಲು ಕೋರಿದೆ.

**ಸ್ಥಾನಗಳ ವಿವರ**

| ಕ್ರ.ಸಂ. | ಸ್ಥಾನ | ಸಂಖ್ಯೆ |
|---|---|---|
| 1 | ರಾಜ್ಯಕ್ಕೆ ಪ್ರಥಮ ಸ್ಥಾನ | 1 |
| 2 | ತಾಲೂಕಿಗೆ ಪ್ರಥಮ ಸ್ಥಾನ:-<br>ಸಾಮಾನ್ಯ -1<br>ಪರಿಶಿಷ್ಟ ಜಾತಿ -1<br>ಪರಿಶಿಷ್ಟ ಪಂಗಡ -1 | 3 |
| 3 | ತಾಲೂಕಿಗೆ ದ್ವಿತೀಯ ಸ್ಥಾನ | 1 |
| 4 | ತಾಲೂಕಿಗೆ ತೃತೀಯ ಸ್ಥಾನ | 1 |

ನಿಬಂಧನೆಗಳು

- ಪ್ರತಿ ತಾಲ್ಲೂಕಿನಿಂದ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿ ಅತಿ ಹೆಚ್ಚು ಅಂಕಗಳಿಸಿ ಪ್ರಥಮ, ದ್ವಿತೀಯ, ತೃತೀಯ ಸ್ಥಾನ ಪಡೆದು ಉತ್ತೀರ್ಣರಾದ ಹಾಗೂ ತಾಲೂಕಿಗೆ ಹೆಚ್ಚು ಅಂಕಗಳಿಸಿದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ತಲಾ ಒಬ್ಬರಂತೆ ವಿದ್ಯಾರ್ಥಿಗಳ ವಿವರಗಳನ್ನು (ಸಾಮಾನ್ಯವಾಗಿ ಐದು ವಿದ್ಯಾರ್ಥಿಗಳು) ಮಾತ್ರ ನೀಡಲು ಕೋರಿದೆ. ಈ ಮೂರು ಸ್ಥಾನಗಳಲ್ಲಿ ಒಂದು ವೇಳೆ ಒಂದೇ ತರನಾದ ಅಂಕ ಪಡೆದ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿದ್ದರೆ ಅವರನ್ನೂ ಪರಿಗಣಿಸಿ ಪಟ್ಟಿಯಲ್ಲಿ ಸೇರಿಸಬೇಕು.

- ರಾಜ್ಯದಲ್ಲಿನ ಸರ್ಕಾರಿ ಹಾಗೂ ಮಾನ್ಯತೆ ಪಡೆದ ಖಾಸಗಿ ಅನುದಾನ ಸಹಿತ/ಅನುದಾನ ರಹಿತ (ಕನ್ನಡ ಮಾಧ್ಯಮದ) ಪದವಿ ಪೂರ್ವ ಕಾಲೇಜುಗಳಿಂದ ಆಯ್ಕೆಗೊಳಿಸಿ **ಕ್ರೋಢಿಕೃತ** ಅರ್ಹ ವಿದ್ಯಾರ್ಥಿಗಳ ಪಟ್ಟಿ ನೀಡಬೇಕು.

- ಆಯ್ಕೆ ಮಾಡುವಾಗ ವಿದ್ಯಾರ್ಥಿಗಳು ಪರೀಕ್ಷೆಯಲ್ಲಿ **ಯಾವುದೇ ಭಾಷಾ ವಿಷಯಗಳಿದ್ದರೂ ಮೂರು ಪ್ರಮುಖ ವಿಷಯಗಳನ್ನು ಕನ್ನಡ ಮಾಧ್ಯಮದಲ್ಲಿ ಬರೆದು** ಮೊದಲನೇ ಬಾರಿಗೆ ಉತ್ತೀರ್ಣರಾಗಿರತಕ್ಕದ್ದು.

- ಖಾಸಗಿ ವಿದ್ಯಾರ್ಥಿಗಳನ್ನು ಆಯ್ಕೆಗೆ ಪರಿಗಣಿಸುವಂತಿಲ್ಲ.

- **2016**ನೇ ಸಾಲಿನ ಮಾರ್ಚ್ ತಿಂಗಳಲ್ಲಿ **ಪ್ರಥಮ ಬಾರಿಗೆ** ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿ ಪರೀಕ್ಷೆ ಬರೆದ ವಿದ್ಯಾರ್ಥಿಗಳನ್ನು ಮಾತ್ರ ಗುರುತಿಸುವುದು. (ಅದೇ ವರ್ಷದ ಜೂನ್/ಜುಲೈನಲ್ಲಿ ನಡೆಯುವ ಪೂರಕ/ಸಪ್ಲಿಮೆಂಟರಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದಲ್ಲಿ ಆಯ್ಕೆಗೆ ಪರಿಗಣಿಸತಕ್ಕದ್ದಲ್ಲ)

- **ಮರುಎಣಿಕೆ/ಮರು ಮೌಲ್ಯಮಾಪನದಲ್ಲಿ** ವಿದ್ಯಾರ್ಥಿಯ ಅಂಕಗಳು ಬದಲಾಗಿದ್ದಲ್ಲಿ ಪರಿಷ್ಕೃತಗೊಳಿಸಿದ ಅರ್ಹ ವಿದ್ಯಾರ್ಥಿಯ ಹೆಸರನ್ನು ಆಯ್ಕೆ ಪಟ್ಟಿಗೆ ಪರಿಗಣಿಸಬಹುದು.

- ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿಯು ಯಾವುದೇ ತಾಲ್ಲೂಕಿನಲ್ಲಿದ್ದರೂ ಅದನ್ನು ಹೊರತು ಪಡಿಸಿ ಆ ತಾಲ್ಲೂಕಿನ ಪ್ರಥಮ (ಸಾಮಾನ್ಯ 1, ಪರಿಶಿಷ್ಟ ಜಾತಿ 1, ಪರಿಶಿಷ್ಟ ಪಂಗಡ 1), ದ್ವಿತೀಯ, ಹಾಗೂ ತೃತೀಯ ಸ್ಥಾನ ಪಡೆದ ವಿದ್ಯಾಥಿಗಳ ಹೆಸರನ್ನು ನೀಡುವುದು.

- ವಿದ್ಯಾರ್ಥಿಗಳ ಹೆಸರು, ಶಾಲೆಯ ಹಾಗೂ ಮನೆಯ ವಿಳಾಸ, (ಪೋಷಕರ/ವಿದ್ಯಾರ್ಥಿಯ ದೂರವಾಣಿ/ಮೊಬೈಲ್ ಸಂಖ್ಯೆ) ಹಾಗೂ ಪಡೆದಿರುವ ಅಂಕಗಳ ಪಟ್ಟಿಯನ್ನು ರಾಜ್ಯಭಾಷೆಯಾದ ಕನ್ನಡದಲ್ಲಿ **ಹಾರ್ಡ್ ಮತ್ತು ಸಾಫ್ಟ್ ಪ್ರತಿಯೊಂದಿಗೆ** ನೀಡುವುದು.

ತಮ್ಮ ವಿಶ್ವಾಸಿ,
ಸಹಿ/-
ಕಾರ್ಯದರ್ಶಿ
ಕನ್ನಡ ಅಭಿವೃದ್ಧಿ ಪ್ರಾಧಿಕಾರ

**ಪ್ರತಿಯನ್ನು:**

1. ಜಂಟಿ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.
2. ಸಹಾಯಕ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು. ಇವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
3. ಕಛೇರಿ ಪ್ರತಿ.

ಕಾರ್ಯದರ್ಶಿ
ಕನ್ನಡ ಅಭಿವೃದ್ಧಿ ಪ್ರಾಧಿಕಾರ

## 2015-16ನೇ ಸಾಲಿನಲ್ಲಿ ಕನ್ನಡ ಮಾಧ್ಯಮದಲ್ಲಿ ಪಿ.ಯು.ಸಿ ತರಗತಿಯಲ್ಲಿ ಅತೀ ಹೆಚ್ಚು ಅಂಕಗಳಿಸಿದ ಶಾಲಾ ವಿದ್ಯಾರ್ಥಿಗಳ ವಿವರ
(ಪ್ರತಿ ತಾಲೂಕಿನಲ್ಲಿ ಪ್ರಥಮ (ಸಾಮಾನ್ಯ 1,ಪರಿಶಿಷ್ಟ ಜಾತಿ 1, ಪರಿಶಿಷ್ಟ ಪಂಗಡ 1), ದ್ವಿತೀಯ ಮತ್ತು ತೃತೀಯ)

| ಕ್ರ. ಸಂ. | ಜಿಲ್ಲೆ | ತಾಲ್ಲೂಕು | ವಿದ್ಯಾರ್ಥಿಯ ಹೆಸರು | ಲಿಂಗ | ನೋಂದಣಿ ಸಂಖ್ಯೆ | ಪಡೆದ ಅಂಕಗಳು | ಶೇಕಡ ವಾರು | ಆಯ್ಕೆಗೊಂಡ ಸ್ಥಾನ | ಶಾಲೆಯ ಹೆಸರು ಮತ್ತು ವಿಳಾಸ | ವಿದ್ಯಾರ್ಥಿಯ ವಿಳಾಸ | ದೂರವಾಣಿ/ ಮೊಬೈಲ್ ಸಂಖ್ಯೆ | ಷರಾ |
|---|---|---|---|---|---|---|---|---|---|---|---|---|
| 1 | 2 | 3 | 4 | 5 | 6 | 7 | 8 | 9 | 10 | 11 | 12 | 13 |
| | | | | | | | | | | | | |
| | | | | | | | | | | | | |
| | | | | | | | | | | | | |
| | | | | | | | | | | | | |
| | | | | | | | | | | | | |
| | | | | | | | | | | | | |
| | | | | | | | | | | | | |
| | | | | | | | | | | | | |
| | | | | | | | | | | | | |
| | | | | | | | | | | | | |
| | | | | | | | | | | | | |
| | | | | | | | | | | | | |
| | | | | | | | | | | | | |
| | | | | | | | | | | | | |
| | | | | | | | | | | | | |
| | | | | | | | | | | | | |
| | | | | | | | | | | | | |
| | | | | | | | | | | | | |
| | | | | | | | | | | | | |